ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 237 |
| ಸದಸ್ಯರ ಹೆಸರು | : | ಶ್ರೀ ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 14-09-2022 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರ ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಚಿಕ್ಕಮಗಳೂರು ಜಿಲ್ಲೆ ಕಳಸ ತಾಲ್ಲೂಕು, ಸಂಸೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ "ಗುಳ್ಯ ಗ್ರಾಮ"ದಲ್ಲಿ ಗ್ರಾಮಸ್ಥರೆ ಸ್ವಯಂ ಸೇತುವೆ ನಿರ್ಮಾಣ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರಸ್ತಾಪಿತ ಗ್ರಾಮದ ಸೇತುವೆ ಹಾಗೂ ರಸ್ತೆಯು ಗ್ರಾಮೀಣ ರಸ್ತೆಯಾಗಿದ್ದು, ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ಒಳಪಡುವುದಿಲ್ಲ. "ಗುಳ್ಯ ಗ್ರಾಮ"ದಲ್ಲಿ ಗುಳ್ಯ ಹಳ್ಳಕ್ಕೆ ಗ್ರಾಮಸ್ಥರೆ ಸ್ವಯಂ ಸೇತುವೆ (ಮರದ ಕಾಲು ಸಂಕ) ನಿರ್ಮಾಣ ಮಾಡಿಕೊಂಡಿರುವುದು ಗಮನಕ್ಕೆ ಬಂದಿರುತ್ತದೆ. |
| ಆ) | ಬಂದಿದ್ದಲ್ಲಿ, ಗುಳ್ಯ ಗ್ರಾಮದ ಜನತೆಗೆ ಮೂಲಸೌಕರ್ಯ ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | ಸರ್ಕಾರದ ಪತ್ರ ದಿನಾಂಕ:05.09.2022 ರಲ್ಲಿ ಮೂಡಿಗೆರೆ ಕ್ಷೇತ್ರ ಕಳಸ ತಾಲ್ಲೂಕು ಗುಳ್ಯ ಗ್ರಾಮದಲ್ಲಿ ಸೇತುವೆ ನಿರ್ಮಾಣ ಕಾಮಗಾರಿಯನ್ನು ರೂ.100.00 ಲಕ್ಷಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳಲು ಲೆಕ್ಕಶೀರ್ಷಿಕೆ 5054-03-101-0-02-132 ಪ್ರಮುಖ ಜಿಲ್ಲಾ ರಸ್ತೆ ಸೇತುವೆಗಳು-ಬಂಡವಾಳ ವೆಚ್ಚಗಳು ಶೀರ್ಷಿಕೆಯಡಿ ಅನುಮೋದನೆ ನೀಡಲಾಗಿದೆ. ಸದರಿ ಮೊತ್ತದಲ್ಲಿ ಈಗಾಗಲೇ ಗುಳ್ಯ ಹಳ್ಳಕ್ಕೆ ಅಡ್ಡಲಾಗಿ ನಿರ್ಮಿಸಲಾಗಿರುವ ಮರದ ಕಾಲುಸಂಕ ಇರುವ ಜಾಗದಲ್ಲಿ ಸೇತುವೆ ನಿರ್ಮಾಣವನ್ನು ಕೈಗೊಳ್ಳಲು ಕಾಮಗಾರಿಯ ಅಂದಾಜುಪಟ್ಟಿ ತಯಾರಿಕಾ ಹಂತದಲ್ಲಿದ್ದು, ಆದ್ಯತೆ ಮೇಲೆ ಟೆಂಡರ್ ಕರೆದು ಕಾಮಗಾರಿ ಕೈಗೆತ್ತಿಕೊಳ್ಳಲು ಕ್ರಮ ವಹಿಸಲಾಗುತ್ತಿದೆ. |
| ಇ) | ಗುಳ್ಯ ಗ್ರಾಮದಲ್ಲಿ 100ಕ್ಕೂ ಹೆಚ್ಚು ಪರಿಶಿಷ್ಟ ಜಾತಿಗೆ ಸೇರಿದ ಕುಟುಂಬಗಳು ವಾಸವಾಗಿದ್ದು, ಈವರೆಗೂ ಈ ಗ್ರಾಮಕ್ಕೆ ಸಂಪರ್ಕ ರಸ್ತೆ ಇಲ್ಲದೆ, ಸೇತುವೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ ಕೈಗೊಂಡಿರುವ ಕ್ರಮಗಳೇನು; | |
| ಇ) | ಗುಳ್ಯ ಗ್ರಾಮದ ಜನರಿಗೆ ಅನುಕೂಲವಾಗುವಂತೆ ಸೇತುವೆ ನಿರ್ಮಾಣ ಹಾಗೂ ರಸ್ತೆ ನಿರ್ಮಾಣಕ್ಕೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; ಅನುದಾನ ಬಿಡುಗಡೆಯಾದ ಬಗ್ಗೆ ಸಂಪೂರ್ಣ ವಿವರ ನೀಡುವುದು? | ಮುಂದುವರೆದು, ಗುಳ್ಯ ಗ್ರಾಮವನ್ನು ಸಂಪರ್ಕಿಸುವ ರಸ್ತೆಯು ಗ್ರಾಮೀಣ ರಸ್ತೆಯಾಗಿದ್ದು ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ಒಳಪಡುವುದಿಲ್ಲ. ರಸ್ತೆ ಅಭಿವೃದ್ಧಿಗೆ ಅನುದಾನ ಬಿಡುಗಡೆಯಾಗಿರುವುದಿಲ್ಲ. |

ಕಡತ ಸಂಖ್ಯೆ: ಲೋಇ 173 ಸಿಬಿಆರ್ 2022 (ಇ)

(ಸಿ.ಸಿ. ಪಾಟೀಲ)
ಲೋಕೋಪಯೋಗಿ ಸಚಿವರು